ಆ) ಹುಬ್ಬಳ್ಳಿ ಮತ್ತು ಗದಗ್ ವಿಭಾಗಗಳಿಂದ ಧಾರವಾಡ ಜಿಲ್ಲೆಯ ಗ್ರಾಮಾಂತರ ಪ್ರದೇಶದಲ್ಲಿ ಆಚರಣೆಯಾಗುವ 644 ಅನುಸೂಚಿಗಳಿವೆ.

ಇ) ಸಾರ್ವಜನಿಕರಿಗೆ ಉಂಟಾಗುವ ಅನಾನುಕೂಲತೆಯನ್ನು ನಿವಾರಿಸುವ ಸಲುವಾಗಿ ರದ್ದತಿಗಳನ್ನು ಕಡಿಮೆ ಮಾಡಲು ಕ್ರಮಗಳನ್ನು ತೆಗೆದುಕೊಳ್ಳಲಾಗುವುದು.

ವಿಷಯ:- ಜಿಲ್ಲೆಗಳ ಪುನರ್ ವಿಂಗಡನೆ ಕುರಿತು ವರದಿ.

1131 (1969) **ಶ್ರೀ ಮಂಜುನಾಥ ಸಿ. ಕುನ್ನೂರ್ (ಶಿಗ್ಗಾಂವ):-** ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಜಿಲ್ಲೆಗಳ ಪುನರ್ ವಿಂಗಡನೆಯ ಬಗ್ಗೆ ವರದಿ ನೀಡಲು ಸಮಿತಿಗಳನ್ನು ರಚಿಸಲಾಗಿದೆಯೇ?

ಆ) ವಿವಿಧ ಸಮಿತಿಗಳು ನೀಡಿದ ವರದಿಯ ವಿವರವನ್ನು ಸರ್ಕಾರದವರು ನೀಡಬಲ್ಲರೇ?

ಇ) ಹಾವೇರಿ ಜಿಲ್ಲೆಯನ್ನು ಮಾಡುವ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು):-

ಅ) ಹೌದು

ಆ) ವರದಿಗಳು ಪರಿಶೀಲನೆಯಲ್ಲಿರುವುದರಿಂದ ಈ ಹಂತದಲ್ಲಿ ವಿವರಗಳನ್ನು ನೀಡುವುದು ಸೂಕ್ತವಲ್ಲ.

ಇ) ವಿಷಯ ಇನ್ನೂ ಸರ್ಕಾರದ ಪರಿಶೀಲನೆಯಲ್ಲಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:- ಶಿಗ್ಗಾಂವ ಮತ್ತು ಸವಣೂರು ತಾಲ್ಲೂಕಿನಲ್ಲಿ ಸಂಚರಿಸುತ್ತಿರುವ ಬಸ್ಸುಗಳು.

1133 (1908) **ಶ್ರೀ ಮಂಜುನಾಥ ಸಿ. ಕುನ್ನೂರ್ (ಶಿಗ್ಗಾಂವ):-** ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಧಾರವಾಡದಲ್ಲಿ ಜಿಲ್ಲೆ ಶಿಗ್ಗಾಂವ ಮತ್ತು ಸವಣೂರು ತಾಲ್ಲೂಕುಗಳಲ್ಲಿ ಕಳೆದ 3 ವರ್ಷಗಳಿಂದ ಸಂಚರಿಸುತ್ತಿರುವ ಬಸ್ಸುಗಳ ಸಂಖ್ಯೆ ಎಷ್ಟು?

ಆ) ಶಿಗ್ಗಾಂವ ತಾಲ್ಲೂಕು ಬಂಕಾಪುರ, ಸವಣೂರು ತಾಲ್ಲೂಕು ಕಡಕೋಳ, ಕಲಿವಾಳ, ಇಚ್ಚಂಗಿ, ಗ್ರಾಮದ ಟಪಾಲ ಬಸ್, ಕಳಸೂರ್ ಬಸ್ ಹಾಗೂ ಉಳಿದ ಮಾರ್ಗಗಳಲ್ಲಿ ಸಾರಿಗೆ ಬಸ್ ಎಷ್ಟು ಕಡೆ ನಿಲ್ಲಿಸಲಾಗಿದೆ?

ಇ) ಇಲ್ಲಿನ ಗ್ರಾಮೀಣ ಜನರಿಗೆ ತೊಂದರೆಯಾಗಿರುವುದನ್ನು ನಿವಾರಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಾರಿಗೆ ಸಚಿವರು):-

ಅ) ಪ್ರತಿ ತಾಲ್ಲೂಕಿನಲ್ಲಿ 8 ಅನುಸೂಚಿಗಳು.